LAC No. 69/2001
PW. - 1

**ದಿನಾಂಕಃ 21.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಪಾಟಿ ಸವಾಲುಃ ಎದುರುದಾರರ ಪರವಾಗಿ ಡಿ ಜಿ ಪಿ ರವರಿಂದ**

ಸರ್ಕಾರದವರು ವಶಪಡಿಸಿಕೊಂಡಿರುವ ನಮ್ಮ ಭೂಮಿ ಖುಷ್ಕಿ ಭೂಮಿ ಎಂದರೆ ಸರಿಯಲ್ಲ, ಸಾಕ್ಷಿ ಮುಂದುವರೆದು ನಮ್ಮ ಭೂಮಿಯಲ್ಲಿ ಬಾವಿಯಿದ್ದು, ಅದರ ನೀರಿನ್ನು ಬಳಸಿ ವ್ಯವಸಾಯ ಮಾಡುತ್ತಿದ್ದೇವು ಎಂದು ಹೇಳುತ್ತಾರೆ. ನಮ್ಮ ಜಮೀನಿನಲ್ಲಿ ಬಾವಿ ಇದೆ ಎಂದು ತೋರಿಸಲು ನಾನು ದಾಖಲೆ ಹಾಜರುಪಡಿಸಿರುವುದಿಲ್ಲ. ನಮ್ಮ ಜಮೀನು ಖುಷ್ಕಿ ಜಮಿನು ಎನ್ನುವ ಕಾರಣಕ್ಕೆ ಭೂ ಸ್ವಾಧೀನ ಅಧಿಕಾರಿರವರು ಐತೀರ್ಪಿನಲ್ಲಿ ಕಾಣಿಸಿದ ಭೂಮಿಯ ಮೌಲ್ಯ ಮಾಪನ ಸರಿಯಿದೆ ಎಂದರೆ ಸರಿಯಲ್ಲ. ವರ್ಷಕ್ಕೆ ನಮ್ಮ ಜಮೀನಿನಲ್ಲಿ ಒಂದೇ ಬೆಳೆಯನ್ನು ಬೆಳೆಯುತ್ತೇವೆ. ನಮ್ಮ ಜಮೀನು ನೀರಾವರಿ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-10 ದಾಖಲೆ ನಮ್ಮ ಜಮೀನಿಗೆ ಸಂಬಂಧಪಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ದಾಖಲೆ ಹಾಜರು ಮಾಡಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನೆ ಮೇರೆಗೆ ಬೆರಳಚ್ಚುಗಾರ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಿರುತ್ತಾರೆ ಮತ್ತು ಅದನ್ನು ಸಾಕ್ಷಿ ಮತ್ತು ಅವರ ಪರ ವಕೀಲರು ನೋಡಿ ತಿಳಿದುಕೊಂಡಿರುತ್ತಾರೆ.)

**ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು,**
**ರಾಯಚೂರು.**